ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/09/ಇಸಿಎಸ್(2)/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com

ದಿನಾಂಕ: 13.02.2024

## ಸುತ್ತೋಲೆ

ವಿಷಯ: C-20 ಪಠ್ಯಕ್ರಮದಲ್ಲಿ ವಿದ್ಯಾರ್ಥಿಗಳು ಮರುಮೌಲ್ಯಮಾಪನ ಹಾಗೂ ಉತ್ತರ ಪತ್ರಿಕೆಗಳ ಛಾಯ ಪ್ರತಿ ಪಡೆಯಲು ವಿವಿಧ ಪಠ್ಯ ವಿಷಯಗಳ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಗಳಿಸಿರುವ ಅಂಕಗಳನ್ನು ತಿಳಿಸುವ ಬಗ್ಗೆ.

ಉಲ್ಲೇಖ:1. Regulations of Diploma Programme for the Curriculum-2020

2. ಈ ಕಛೇರಿ ಸುತ್ತೋಲೆ ಸಂಖ್ಯೆ:ಬಿಟಿಇ 09/ಇಸಿಎಸ್(2) 2024 ದಿ:07.02.2024

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020-21ನೇ ಶೈಕ್ಷಣಿಕ ಸಾಲಿನಿಂದ ಡಿಪ್ಲೋಮ ವ್ಯಾಸಂಗದಲ್ಲಿ C-20 ಪಠ್ಯಕ್ರಮಗಳನ್ನು ಅಳವಡಿಸಿಕೊಂಡಿದ್ದು ಉಲ್ಲೇಖ (1) ರಂತೆ ಸದರಿ ಪಠ್ಯಕ್ರಮಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸೆಮಿಸ್ಟರ್‌ನ ಅಂತಿಮ ಪರೀಕ್ಷೆಗಳಲ್ಲಿ (SEE) ಗಳಿಸಿದ ಗ್ರೇಡ್‌ಗಳನ್ನು, SGPA & CGPA ಗಳನ್ನು BTELinx ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲಾಗಿರುತ್ತದೆ.

ಉಲ್ಲೇಖ (2) ರಂತೆ ಡಿಸೆಂಬರ್-2023 ರ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ವಿವಿಧ ಕೋರ್ಸ್ ಗಳಲ್ಲಿ ಗಳಿಸಿರುವ ಗ್ರೇಡ್ (F/C/C+/B/B+/A) ಗಳನ್ನು ಉತ್ತಮಪಡಿಸಿಕೊಳ್ಳಲು ಮರುಮೌಲ್ಯಮಾಪನ ಹಾಗೂ ಉತ್ತರಪತ್ರಿಕೆಗಳ ಛಾಯ ಪ್ರತಿ ಪಡೆಯುವ ಸಂಬಂಧ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ವಿವಿಧ ವಿಷಯಗಳಲ್ಲಿ ಪಡೆದಿರುವ ಅಂಕಗಳನ್ನು ತುಲನಾತ್ಮಕವಾಗಿ ಪರಿಶೀಲಿಸಿ ಮರುಮೌಲ್ಯಮಾಪನ ಮತ್ತು ಛಾಯಾ ಪ್ರತಿಗಳನ್ನು ಪಡೆಯುವ ಸಂಬಂಧ ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಪ್ರಾಂಶುಪಾಲರುಗಳು BTELinx ವೆಬ್‌ಪೋರ್ಟಲ್‌ನಲ್ಲಿ ಪ್ರಚುರಪಡಿಸಿದಂತೆ ವಿದ್ಯಾರ್ಥಿಯು ಸದರಿ ವಿಷಯದ/ಗಳಲ್ಲಿ ಗಳಿಸಿರುವ ಅಂಕಗಳನ್ನು ತಿಳಿಸಲು ಸೂಚಿಸಲಾಗಿದೆ.

ಪ್ರಿನ್ಸಿಪಾಲರುಗಳು ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳಿಗೆ ಅಂಕಗಳನ್ನು ಮುದ್ರಿಸಿ ನೀಡಬಾರದೆಂದು ಸ್ಪಷ್ಟವಾಗಿ ತಿಳಿಸಲಾಗಿದೆ. ಯಾವುದೇ ವಿದ್ಯಾರ್ಥಿಗೆ (C-20) ನಿಯಮಬಾಹಿರವಾಗಿ ಅಂಕಗಳನ್ನು ಮುದ್ರಿಸಿ ನೀಡಿದಲ್ಲಿ ಅಂತಹ ಪ್ರಿನ್ಸಿಪಾಲರುಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದೆಂದು ಎಚ್ಚರಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ-ಅಗತ್ಯ ಕ್ರಮಕ್ಕಾಗಿ

ಪ್ರತಿ:

1.ಶ್ರೀ ಹರೀಶ ಶೆಟ್ಟಿ, ಪ್ರಿನ್ಸಿಪಾಲರು, ಕರ್ನಾಟಕ (ಸ) ಪಾಲಿಟೆಕ್ನಿಕ್, ಮಂಗಳೂರು-ಅಗತ್ಯ ಕ್ರಮಕ್ಕಾಗಿ

2.ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

3.ಕಂಪ್ಯೂಟರ್ ವಿಭಾಗಕ್ಕೆ - ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು

4.ಕಾರ್ಯದರ್ಶಿಯವರ ಆಪ್ತ ಶಾಖೆಗೆ